**ಕರ್ನಾಟಕ ವಿಧಾನ ಪರಿಷತ್ತು**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 477 (577)
2. ಮಾನ್ಯ ಸದಸ್ಯರ ಹೆಸರು – ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ – 20/02/2023
4. ಉತ್ತರಿಸುವ ಸಚಿವರು – ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಪ್ರಶ್ನೆ | ಉತ್ತರ |
|---|---|
| ಅ) ಬಳ್ಳಾರಿ ಜಿಲ್ಲೆ ಕಂಪ್ಲಿ ತಾಲ್ಲೂಕಿನಲ್ಲಿ (ಬಿ.ಇ.ಓ.) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯನ್ನು ಪ್ರಾರಂಭಿಸಲಾಗಿದೆಯೇ; ಇಲ್ಲವಾದಲ್ಲಿ ಯಾವ ಕಾರಣಕ್ಕೆ ಪ್ರಾರಂಭಿಸಲಾಗಿಲ್ಲ; (ಮಾಹಿತಿ ನೀಡುವುದು)<br>ಆ) ಕಂಪ್ಲಿ (ಬಿ.ಇ.ಓ.) ವ್ಯಾಪ್ತಿಗೆ ಒಳಪಡುವ ಶಾಲೆಗಳು ಎಷ್ಟು; (ಮಾಹಿತಿ ನೀಡುವುದು)<br>ಇ) 2017ರಲ್ಲಿ ಕಂಪ್ಲಿಯು ನೂತನ ತಾಲ್ಲೂಕು ಕೇಂದ್ರವಾಗಿ ಘೋಷಣೆಯಾಗಿದ್ದರೂ ಸಹ ಇಲ್ಲಿಯವರೆಗೆ ಬಿ.ಇ.ಓ. ಕಚೇರಿಯು ಪ್ರಾರಂಭವಾಗದಿರುವುದಕ್ಕೆ ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಆರಂಭ ಮಾಡಲಾಗುವುದು? (ವಿವರ ನೀಡುವುದು) | ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲ್ಲೂಕನ್ನು ಒಳಗೊಂಡಂತೆ ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳನ್ನು ಪ್ರಾರಂಭಿಸಲು ಅಗತ್ಯವಿರುವ ವಿವಿಧ ವೃಂದಗಳ ಸುಮಾರು 1000ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸುವ ಪ್ರಸ್ತಾವನೆಯನ್ನು 2021-22ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆಯಲ್ಲಿ ಮಂಡಿಸಲಾಗಿತ್ತು. ಆದರೆ, ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು 2021-22ನೇ ಸಾಲಿನ ಆಯವ್ಯಯದಲ್ಲಿ ಪರಿಗಣಿಸಿರುವುದಿಲ್ಲ. ಕಂಪ್ಲಿ ತಾಲ್ಲೂಕಿನಲ್ಲಿರುವ ಶಾಲೆಗಳ ವಿವರ ಕೆಳಕಂಡಂತಿದೆ:-<br><br>(ಕೋಷ್ಟಕ ಕೆಳಗೆ)<br><br>ಪ್ರಸ್ತುತ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಕುರಿತು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಕೆಲವು ಹುದ್ದೆಗಳನ್ನು ಮರುವಿನ್ಯಾಸಗೊಳಿಸುವುದರ ಜೊತೆಗೆ ಸುಮಾರು 1200ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಹಾಗೂ ಸ್ವಂತ ಕಟ್ಟಡ ಲಭ್ಯವಿಲ್ಲದೇ ಇರುವ ಸ್ಥಳಗಳಲ್ಲಿ ಬಾಡಿಗೆ ಕಟ್ಟಡಗಳನ್ನು ಪಡೆಯಲು, ಹೊಸ ಕಚೇರಿಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ವೇತನ ಭರಿಸಲು, ಅಗತ್ಯ ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಕಚೇರಿ ನಿರ್ವಹಣೆಗಾಗಿ ಸುಮಾರು ರೂ.1069.24 ಲಕ್ಷಗಳು ಅಗತ್ಯವಿರುವುದಾಗಿ ಪ್ರಸ್ತಾಪಿಸಲಾಗಿರುತ್ತದೆ. ಅದರಂತೆ ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿರುತ್ತದೆ. |

| ಕ್ರ ಸಂ. | ವಿವರ | ಪ್ರಾಥಮಿಕ ಶಾಲೆಗಳು | ಪ್ರೌಢ ಶಾಲೆಗಳು | ಒಟ್ಟು |
|---|---|---|---|---|
| 1 | ಸರ್ಕಾರಿ | 49 | 08 | 57 |
| 2 | ಅನುದಾನಿತ | 05 | 02 | 07 |
| 3 | ಅನುದಾನರಹಿತ | 27 | 12 | 39 |
| | **ಒಟ್ಟು** | **81** | **22** | **103** |

ಸಂಖ್ಯೆ: ಇಪಿ 14 ಪಿಡಿಬಿ 2023

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು